ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/09/ಇಸಿಎಸ್(2)/2019-20

ಕಾರ್ಯದರ್ಶಿಯವರ ಕಛೇರಿ
ತಾಂತ್ರಿಕ ಪರೀಕ್ಷಾ ಮಂಡಳಿ
ಅರಮನೆ ರಸ್ತೆ, ಬೆಂಗಳೂರು -01
ದಿನಾಂಕ: 21-01-2020

**ಸುತ್ತೋಲೆ**

ವಿಷಯ: 2019ರ ಅಕ್ಟೋಬರ್/ನವೆಂಬರ್ ಸೆಮಿಸ್ಟರ್ ಪರೀಕ್ಷೆಯ ಥಿಯರಿ ವಿಷಯದ ಉತ್ತರ ಪತ್ರಿಕೆಯ ಫೋಟೋ ಪ್ರತಿಯನ್ನು ನೀಡುವ ಬಗ್ಗೆ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2019ರ ಅಕ್ಟೋಬರ್/ನವೆಂಬರ್ ಸೆಮಿಸ್ಟರ್ ಪರೀಕ್ಷೆಯ ಥಿಯರಿ ವಿಷಯದ ಉತ್ತರ ಪತ್ರಿಕೆಗಳ ಫೋಟೋ ಪ್ರತಿಗಾಗಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳ ದೃಢೀಕೃತ ಫೋಟೋ ಪ್ರತಿಯನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿ ಕಳುಹಿಸಿ ಕೊಡಲಾಗಿದೆ. ಈ ಉತ್ತರ ಪತ್ರಿಕೆಗಳನ್ನು ಸಂಬಂಧಿಸಿದ ವಿದ್ಯಾರ್ಥಿಗಳಿಗೆ ತುರ್ತಾಗಿ ತಲುಪಿಸಬೇಕೆಂದು ಸಂಬಂಧಿಸಿದ ಸಂಸ್ಥೆಗಳಿಗೆ ತಿಳಿಸಲಾಗಿದೆ ಹಾಗೂ ವಿದ್ಯಾರ್ಥಿಗಳಿಗೆ ಫೋಟೋ ಪ್ರತಿ ತಲುಪಿಸಿದ ಬಗ್ಗೆ ವಿದ್ಯಾರ್ಥಿಗಳಿಂದ ಸ್ವೀಕೃತಿ ಪತ್ರ ಪಡೆಯುವಂತೆ ಸೂಚಿಸಲಾಗಿದೆ.

ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳಲ್ಲಿ, ವಿದ್ಯಾರ್ಥಿಗಳು ಉತ್ತರ ಬರೆದಿರುವ ಪುಟಗಳನ್ನು ಮಾತ್ರ ಫೋಟೊ ಪ್ರತಿ ಮಾಡಿ ದೃಢೀಕರಿಸಿ ನೀಡಲಾಗಿದೆ. ಖಾಲಿ ಬಿಟ್ಟಿರುವ ಪುಟಗಳ ಫೋಟೋ ಪ್ರತಿ ನೀಡಲಾಗಿರುವುದಿಲ್ಲ. ಈ ವಿಷಯವನ್ನು ವಿದ್ಯಾರ್ಥಿಗಳ ಗಮನಕ್ಕೆ ತಪ್ಪದೇ ತರುವಂತೆ ತಿಳಿಸಲಾಗಿದೆ.

ಉತ್ತರ ಪತ್ರಿಕೆಗಳ ಫೋಟೋ ಪ್ರತಿಗಾಗಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳು ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ, ಫೋಟೋ ಪ್ರತಿ ತಲುಪಿದ ನಂತರ ನಿಗದಿತ ಶುಲ್ಕ 550/- ರೂಗಳನ್ನು ಖಜಾನೆ-II ಮೂಲಕ (ಲೆಕ್ಕ ಶೀರ್ಷಿಕೆ 0202-02-101-0-01) ಪಾವತಿಸಿ ಮರು ಮೌಲ್ಯಮಾಪನದ ಅರ್ಜಿಯನ್ನು ಖುದ್ದಾಗಿ ಅಥವಾ ಅಂಚೆ ಮೂಲಕ **ದಿನಾಂಕ:30-01-2020 ರೊಳಗೆ** ಈ ಕಛೇರಿಗೆ ಸಲ್ಲಿಸುವಂತೆ ತಿಳಿಸಲಾಗಿದೆ. ಈ ವಿಷಯವನ್ನು ವಿದ್ಯಾರ್ಥಿಗಳ ಗಮನಕ್ಕೆ ತಪ್ಪದೇ ತರುವಂತೆ ತಿಳಿಸಲಾಗಿದೆ.

ಉತ್ತರ ಪತ್ರಿಕೆಗಳ ಫೋಟೋ ಪ್ರತಿಗಾಗಿ ಅರ್ಜಿ ಸಲ್ಲಿಸಿರುವ ಯಾವುದೇ ವಿದ್ಯಾರ್ಥಿಯ ಫೋಟೋ ಪ್ರತಿ ತಲುಪದೇ ಇದ್ದ ಪಕ್ಷದಲ್ಲಿ ಸಂಬಂಧಿಸಿದ ಸಂಸ್ಥೆಯ ಪ್ರಿನ್ಸಿಪಾಲರು ಮಂಡಳಿಯನ್ನು ಸಂಪರ್ಕಿಸುವಂತೆ ಸೂಚಿಸಲಾಗಿದೆ.

ಕಾರ್ಯದರ್ಶಿ 21/01/2020

ಇವರಿಗೆ,
ರಾಜ್ಯದಲ್ಲಿನ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ: 1) ಇ-ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
2) ಕಾರ್ಯದರ್ಶಿಯವರ ಆಪ್ತ ಶಾಖೆ